# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮

ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭

http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೨೩-೦೮-೨೦೨೩

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

..................................................ಬೆಂಗಳೂರು

**ಪ್ರಕಟಣೆಯ ಕೃಪೆಗಾಗಿ**

## ಕನ್ನಡ ಸಾಹಿತ್ಯ ಪರಿಷತ್ತಿನ ವ್ಯಾಪ್ತಿ ವಿಸ್ತರಿಸಿದ ಜೀವಿ - ನಾಡೋಜ ಡಾ. ಮಹೇಶ ಜೋಶಿ ವಿಶ್ಲೇಷಣೆ

ಬೆಂಗಳೂರು: **ಪ್ರೊ.ಜಿ.ವೆಂಕಟಸುಬ್ಬಯ್ಯನವರಿಗೆ** ಸಿಗಬೇಕಾದ ಗೌರವಗಳು ಯಾವುದೂ ಸಕಾಲಕ್ಕೆ ಸಿಗಲಿಲ್ಲ. ಅವರ ೯೨ನೆಯ ವರ್ಷಕ್ಕೆ ನಾಡೋಜ, ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾದಾಗ ೯೮ ವರ್ಷ, ಪಂಪ ಪ್ರಶಸ್ತಿ ಬಂದಾಗ ೧೦೧ ವರ್ಷ, ಪದ್ಮಶ್ರೀ ಬಂದಾಗ ೧೦೪ ವರ್ಷ, ಕೇಂದ್ರ ಸರ್ಕಾರದ ಭಾಷಾ ಸಮ್ಮಾನ ಗೌರವ ಬಂದಾಗ ೧೦೫ ವರ್ಷ ಜಿ.ವಿಯವರು ಇದರ ಕುರಿತು ಎಂದಿಗೂ ಆಕ್ಷೇಪ ವ್ಯಕ್ತಪಡಿಸದೆ ಇನ್ನೂ ಕನ್ನಡದ ಸೇವೆ ಮಾಡುವುದಕ್ಕೆ ಅವಕಾಶಕ್ಕಾಗಿ ಹಾತೊರೆಯುತ್ತಿದ್ದ ಕನ್ನಡದ ಕಟ್ಟಾಳು ಎಂದು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅಭಿಪ್ರಾಯಪಟ್ಟರು.

ಅವರು ಇಂದು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆದ **ಪ್ರೊ. ಜಿ.ವೆಂಕಟಸುಬ್ಬಯ್ಯನವರ ೧೧೦ನೆಯ ಜನ್ಮ ದಿನದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಪುಷ್ಪನಮನ ಕಾರ್ಯಕ್ರಮದಲ್ಲಿ** ಭಾಗವಹಿಸಿ ಮಾತನಾಡುತ್ತಿದ್ದರು. ನಿಘಂಟು ತಜ್ಞರಾಗಿ ಹೆಸರು ಮಾಡಿದ ವೆಂಕಟಸುಬ್ಬಯ್ಯನವರು ಕನ್ನಡ ಸಾಹಿತ್ಯ ಪರಿಷತ್ತಿಗೂ ಕೂಡ ದೊಡ್ಡ ಪ್ರಮಾಣದ ಕೊಡುಗೆಯನ್ನು ನೀಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನ ಜೊತೆಗೆ ವೆಂಕಟಸುಬ್ಬಯ್ಯನವರ ಒಡನಾಟಕ್ಕೆ ಸುದೀರ್ಘವಾಗಿತ್ತು. ೧೯೫೪ರಲ್ಲಿ ಮೊದಲು ಅವರು ಗೌರವ ಕಾರ್ಯದರ್ಶಿಗಳಾದರು, ೧೯೬೪ರಲ್ಲಿ ಅಧ್ಯಕ್ಷರಾದರು. ಆಗ ಪರಿಷತ್ತಿನ ಆರ್ಥಿಕ ಪರಿಸ್ಥಿತಿ ಸಂಕಷ್ಟದಲ್ಲಿ ಇತ್ತು. ಸರ್ಕಾರದ ಬಳಿ ಅನುದಾನ ಕೇಳಿದರೆ ಮೊದಲು ಸಾಲ ತೀರಿಸಿ ಎನ್ನುವ ಉತ್ತರ ಬಂದಾಗ, ಜಿದ್ದಿನಿಂದ ಓಡಾಡಿ ಹಿರಿಯರಿಂದ, ಕನ್ನಡ ಪ್ರೇಮಿಗಳಿಂದ ಅನುದಾನ ತಂದರು. ಸರಸ್ವತಿ ಮಂದಿರದಲ್ಲಿ ನಿರಂತರ ಕಾರ್ಯಕ್ರಮಗಳನ್ನು ತೋರಿಸಿದರು. ಪ್ರಕಟಣೆಗಳನ್ನೂ ಮಾಡಿದರು. ನಂತರ ಆಗಿನ ಹಣಕಾಸು ಸಚಿವ ರಾಮಕೃಷ್ಣ ಹೆಗಡೆಯವರನ್ನು ಭೇಟಿ ಮಾಡಿ 'ಕೆಲಸ ಮಾಡಿದ್ದೇವೆ, ಅನುದಾನ ಕೊಡಿ' ಎಂದು ಕೇಳಿದರು ಜಿ.ವಿಯವರ ಪ್ರಯತ್ನದಿಂದ ಕನ್ನಡ ಸಾಹಿತ್ಯ ಪರಿಷತ್ತಿಗೆ ಇಪ್ಪತ್ತೈದು ಸಾವಿರ ರೂಪಾಯಿಗಳ ಅನುದಾನ ಸಿಕ್ಕಿತ್ತು. ಎರಡು ಸಾಹಿತ್ಯ ಸಮ್ಮೇಳನಗಳು, ಪುಸ್ತಕ ಪ್ರಕಟಣೆ, ದಾಖಲೆ ಪ್ರಮಾಣದ ವಿಚಾರಸಂಕಿರಣಗಳನ್ನು ನಡೆಸಿದ ನಂತರ ಕೂಡ ಅಧ್ಯಕ್ಷತೆ ಬಿಡುವಾಗ ಅರವತ್ತೈದು ಸಾವಿರ ರೂಪಾಯಿಗಳನ್ನು ಪರಿಷತ್ತಿಗೆ ಉಳಿತಾಯ ಮಾಡಿದ್ದರು. ಮೈಸೂರು ಪ್ರಾಂತ್ಯಕ್ಕೆ ಹೆಚ್ಚು ಸೀಮಿತವಾಗಿದ್ದ ಪರಿಷತ್‌ಗೆ ಅಖಿಲ ಕರ್ನಾಟಕದ ಸ್ವರೂಪ ನೀಡಿದ್ದೂ ಕೂಡ ಜಿ.ವಿಯವರ ಹೆಗ್ಗಳಿಕೆ ಎಂದು **ನಾಡೋಜ ಡಾ. ಮಹೇಶ ಜೋಶಿ** ನೆನಪಿಸಿಕೊಂಡರು.

ಕನ್ನಡ ನಿಘಂಟು ಮೂಡುವುದಕ್ಕೆ **ಪ್ರೊ. ಜಿ. ವೆಂಕಟಸುಬ್ಬಯ್ಯನವರ** ಕೊಡುಗೆ ಮಹತ್ವವಾದದ್ದು. ಕನ್ನಡ ನಿಘಂಟು ತಯಾರು ಮಾಡಬೇಕು ಎಂದು ಅವರಿಗೆ ಮೊದಲಿನಿಂದಲೂ ಆಸಕ್ತಿ ಇತ್ತು. 1943ರ ವರ್ಷದಲ್ಲಿ ಡಿ. ಎಲ್. ನರಸಿಂಹಾಚಾರ್ಯರು ನಿಘಂಟಿಗೆ ಶಬ್ದಗಳನ್ನು ಆರಿಸುವುದಕ್ಕೆ ಆಯೋಜಿದವರ ಜೊತೆ ಪ್ರೊ. ಜಿ. ವಿ. ಅವರೂ ಇದ್ದರು. ಒಬ್ಬರು. ಹಳೆಗನ್ನಡದಿಂದ, ಹೊಸಗನ್ನಡದಿಂದ ನಿಘಂಟಿಗೆ ಬೇಕಾದ ಶಬ್ದಗಳನ್ನು ಆಯ್ಕೆ ಮಾಡುವ ಜವಾಬ್ದಾರಿ ವಹಿಸಿ ಜಿ.ವಿ. ಅವರೇ ಪರಿಷತ್ತಿನ ನಿಘಂಟಿಗೆ ಪ್ರಧಾನ

ಸಂಪಾದಕರಾದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಮುನ್ನಡೆಯುತ್ತಿದೆ ಎನ್ನುವುದನ್ನು ಈ ಸಂದರ್ಭದಲ್ಲಿ **ನಾಡೋಜ ಡಾ. ಮಹೇಶ ಜೋಶಿ** ಅವರು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಕಟಣಾ ವಿಭಾಗದ ಸಂಚಾಲಕರಾದ **ಪ್ರೊ.ಎನ್.ಎಸ್.ಶ್ರೀಧರ ಮೂರ್ತಿ** ಅವರು ಮಾತನಾಡಿ ಪ್ರೊ. ಜಿ. ವೆಂಕಟಸುಬ್ಬಯ್ಯನವರು ಹಲವು ಶ್ರೇಷ್ಠ ತಲೆಮಾರುಗಳ ಕೊಂಡಿಯಾಗಿ ನಮ್ಮ ಯುಗದವರಿಗೆ ಪ್ರೇರಕ ಶಕ್ತಿಯಾಗಿದ್ದವರು. ನಮ್ಮ ಕನ್ನಡವನ್ನು ತಿದ್ದಿದರು. ಬರವಣಿಗೆಯ ಮಾದರಿಗಳನ್ನು ಕಲಿಸಿದರು. ಅವರ ಶತಮಾನೋತ್ಸವ ಕಾರ್ಯಕ್ರಮವನ್ನು ಆಯೋಜಿಸುವ ಅದೃಷ್ಟ ನನಗೆ ದೊರಕಿತ್ತು ಎಂದು ಅವರ ಒಡನಾಟವನ್ನು ನೆನಪು ಮಾಡಿ ಕೊಂಡರು. ಕನ್ನಡ ನಿಘಂಟುಗಳ ಪರಂಪರೆಯನ್ನೇ ರೂಪಿಸಿದ ಅವರು ಎರವಲು ಪದಕೋಶದಂತಹ ವಿಶಿಷ್ಟ ಪ್ರಯೋಗವನ್ನು ಮಾಡಿದ್ದರು. ಪತ್ರಕರ್ತರರಿಗೂ ಪದಕೋಶ ಬೇಕು ಎನ್ನುವ ಉದ್ದೇಶದಿಂದ ಅವರು ರೂಪಿಸಿದ **'ಪತ್ರಿಕಾ ಪದಕೋಶ'** ಇಂದಿಗೂ ಮಾದರಿಯಾಗಿದೆ. ಹಿರಿಯರು ಯಾರು ಎಂದರೆ ಕಿರಿಯರ ಏಳಿಗೆಯಲ್ಲಿ ಸಂತೋಷ ಕಾಣುವವರು ಎನ್ನುವುದು ಇಂದಿಗೂ ನನಗೆ ಮಾರ್ಗದರ್ಶಿಯಾಗಿದೆ ಎಂದು ನೆನಪು ಮಾಡಿ ಕೊಂಡರು.

**ಪ್ರೊ. ಜಿ.ವೆಂಕಟಸುಬ್ಬಯ್ಯನವರ ೧೧೦ನೆಯ ಜನ್ಮ ದಿನದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಪುಷ್ಪನಮನ ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಹಾಗೂ ಪರಿಷತ್ತಿನ ಪದಾಧಿಕಾರಿಗಳು ಮತ್ತು ಸಿಬ್ಬಂದಿಗಳು ಪುಷ್ಪನಮನವನ್ನು ಸಲ್ಲಿಸಿದರು. ಪರಿಷತ್ತಿನ ಕಾರ್ಯದರ್ಶಿಗಳಾದ ಶ್ರೀ ನೇ.ಭ.ರಾಮಲಿಂಗ ಶೆಟ್ಟಿ, ಡಾ. ಪದ್ಮಿನಿ ನಾಗರಾಜು, ಕೋಶಾಧ್ಯಕ್ಷರಾದ ಡಾ. ಬಿ.ಎಂ. ಪಟೇಲ್ ಪಾಂಡು, ಪ್ರಕಟಣಾ ವಿಭಾಗದ ಸಂಚಾಲಕರಾದ ಪ್ರೊ. ಎನ್. ಎಸ್. ಶ್ರೀಧರ ಮೂರ್ತಿ, ವಿಶೇಷ ಕರ್ತವ್ಯಾಧಿಕಾರಿ ಶ್ರೀ ಚಿಕ್ಕತಿಮ್ಮಯ್ಯ ಸಿ. ಹಾಗೂ ಸಿಬ್ಬಂದಿಗಳು ಪ್ರೊ.ಜಿ.ವೆಂಕಟಸುಬ್ಬಯ್ಯನವರ** ಪುಷ್ಪನಮನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

ಛಾಯಾಚಿತ್ರ - **ಪ್ರೊ.ಜಿ.ವೆಂಕಟಸುಬ್ಬಯ್ಯನವರ ೧೧೦ನೆಯ ಜನ್ಮ ದಿನಾಚರಣೆಯ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಂಪ ಸಭಾಗಂಣದಲ್ಲಿ ಹಮ್ಮಿಕೊಂಡ ಪುಷ್ಪನಮನ ಕಾರ್ಯಕ್ರಮದಲ್ಲಿ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ.ರಾಮಲಿಂಗ ಶೆಟ್ಟಿ, ಕೋಶಾಧ್ಯಕ್ಷರಾದ ಡಾ. ಬಿ.ಎಂ. ಪಟೇಲ್ ಪಾಂಡು ಪ್ರಕಟಣಾ ವಿಭಾಗದ ಸಂಚಾಲಕರಾದ ಪ್ರೊ. ಎನ್. ಎಸ್. ಶ್ರೀಧರ ಮೂರ್ತಿ, ವಿಶೇಷ ಆಡಳಿತಾಧಿಕಾರಿ ಸಿ. ಚಿಕ್ಕತಿಮ್ಮಯ್ಯ** ಅವರು ಉಪಸ್ಥಿತರಿದ್ದರು.

**ಶ್ರೀನಾಥ್ ಜೆ.**
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು